ನಿ-72-(82)

ವಿಧಾನ ಪರಿಷತ್ತಿನ ಮಾನ್ಯ ಸದಸ್ಯರಾದ ಶ್ರೀ ಮರಿತಿಬ್ಬೇಗೌಡ ಇವರು ನಿಯಮ-72ರ ಅಡಿಯಲ್ಲಿ ಪ್ರಸ್ತಾಪಿಸಿರುವ ಗಮನ ಸೆಳೆಯುವ ಸೂಚನೆಗೆ ಉತ್ತರ (82)

## ಪ್ರಶ್ನೆ

ಸರ್ಕಾರಿ ಇಂಜಿನಿಯರಿಂಗ್ ಹಾಗೂ ಪಾಲಿಟೆಕ್ನಿಕ್ ಕಾಲೇಜುಗಳಲ್ಲಿ ಏಪ್ರಿಲ್ ಮಾಹೆಯಿಂದ ಇದುವರೆವಿಗೆ ವಿದ್ಯುಚ್ಛಕ್ತಿ ಬಿಲ್ ಪಾವತಿಸದ ಹಿನ್ನಲೆಯಲ್ಲಿ ವಿದ್ಯುಚ್ಛಕ್ತಿಯನ್ನು ಸ್ಥಗಿತಗೊಳಿಸಿರುವುದರಿಂದ ಉಂಟಾಗಿರುವ ಗಂಭೀರ ಸಮಸ್ಯೆ ಬಗ್ಗೆ.

## ಉತ್ತರ

ರಾಜ್ಯದಲ್ಲಿ ಪ್ರಸ್ತುತ 91 ಸರ್ಕಾರಿ ಪಾಲಿಟೆಕ್ನಿಕ್‌ಗಳು ಹಾಗೂ 14 ಸರ್ಕಾರಿ ಇಂಜಿನಿಯರಿಂಗ್ ಕಾಲೇಜುಗಳು ಕಾರ್ಯ ನಿರ್ವಹಿಸುತ್ತಿವೆ. ಕೋವಿಡ್-19ರ ಸಾಂಕ್ರಾಮಿಕ ರೋಗದ ಕಾರಣಗಳಿಂದ ಹಣಕಾಸಿನ ಕೊರತೆಯಿಂದಾಗಿ ಹಿಂದಿನ ಸಾಲುಗಳಿಗೆ ಹೋಲಿಸಿದಲ್ಲಿ 2020-21 ಹಾಗೂ 2021-22ನೇ ಆರ್ಥಿಕ ಸಾಲಿಗೆ ಒಟ್ಟಾರೆ ಆಯವ್ಯಯದಲ್ಲಿ ಉನ್ನತ ಶಿಕ್ಷಣ ಇಲಾಖೆಗೆ ಅನುದಾನ ಹಂಚಿಕೆ ಸ್ವಲ್ಪ ಕಡಿಮೆಯಾಗಿರುತ್ತದೆ. ಆದಾಗ್ಯೂ ಉನ್ನತ ಶಿಕ್ಷಣ ಇಲಾಖೆಯ ಇತರೆ ಲೆಕ್ಕಶೀರ್ಷಿಕೆಗಳಡಿ ಲಭ್ಯವಿರುವ ಅನುದಾನದಿಂದ ಮರು ಹೊಂದಾಣಿಕೆ ಮಾಡುವ ಮೂಲಕ ಸರ್ಕಾರಿ ಪಾಲಿಟೆಕ್ನಿಕ್ ಹಾಗೂ ಸರ್ಕಾರಿ ಇಂಜಿನಿಯರಿಂಗ್ ಕಾಲೇಜುಗಳಲ್ಲಿನ ವಿದ್ಯುತ್ ಹಾಗೂ ದೂರವಾಣಿ ವೆಚ್ಚಕ್ಕಾಗಿ ಅನುದಾನವನ್ನು ಬಿಡುಗಡೆ ಮಾಡಲು ಆರ್ಥಿಕ ಇಲಾಖೆಯೊಂದಿಗೆ ಸಮಾಲೋಚಿಸಲಾಗುತ್ತಿದ್ದು, ಈ ಸಂಬಂಧ ಆರ್ಥಿಕ ಇಲಾಖೆಯು ಧನಾತ್ಮಕ ಸ್ಪಂದನೆ ನೀಡಿದೆ.

ಮುಂದುವರೆದು, ತಾಂತ್ರಿಕ ಸಂಸ್ಥೆಗಳ ವಿದ್ಯುತ್ ಸಂಪರ್ಕದ ಬಿಲ್ಲುಗಳನ್ನು ಪಾವತಿಸಲು ಉನ್ನತ ಶಿಕ್ಷಣ ಇಲಾಖೆ ಕ್ರಮ ಕೈಗೊಳ್ಳುತ್ತಿದ್ದು, ಸದರಿ ಸಂಸ್ಥೆಗಳ ವಿದ್ಯುತ್ ಸಂಪರ್ಕವನ್ನು ಕಡಿತ ಮಾಡದಂತೆ ಹಾಗೂ ವಿದ್ಯುತ್ ಸಂಪರ್ಕವನ್ನು ಮರುಸ್ಥಾಪಿಸುವಂತೆ ವಿದ್ಯುತ್ ಸರಬರಾಜು ಕಂಪನಿ ನಿಯಮಿತದ ವ್ಯವಸ್ಥಾಪಕ ನಿರ್ದೇಶಕರನ್ನು ಕೋರಿದ್ದು, ಅವರೂ ಸಹ ಸಕಾರಾತ್ಮಕವಾಗಿ ಸ್ಪಂದಿಸಿದ್ದಾರೆ. ಈ ಹಿನ್ನಲೆಯಲ್ಲಿ ಸರ್ಕಾರಿ ತಾಂತ್ರಿಕ ಸಂಸ್ಥೆಗಳಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳಿಗೆ ನಿರಂತರವಾಗಿ ವಿದ್ಯುತ್ ಸಂಪರ್ಕವನ್ನು ಒದಗಿಸುತ್ತಿದ್ದು, ಯಾವುದೇ ಅಡೆತಡೆ ಆಗದಂತೆ ಎಚ್ಚರಿಕೆ ವಹಿಸಲಾಗುತ್ತಿದೆ.

(ಡಾ: ಅಶ್ವಥ್ ನಾರಾಯಣ ಸಿ.ಎನ್)
ಉನ್ನತ ಶಿಕ್ಷಣ, ಮಾಹಿತಿ ತಂತ್ರಜ್ಞಾನ ಮತ್ತು
ಜೈವಿಕ ತಂತ್ರಜ್ಞಾನ, ವಿಜ್ಞಾನ ಮತ್ತು
ತಂತ್ರಜ್ಞಾನ ಹಾಗೂ ಕೌಶಲ್ಯಾಭಿವೃದ್ಧಿ ಸಚಿವರು.

ಸಂಖ್ಯೆ: ಇಡಿ 106 ಹೆಚ್‌ಪಿಟಿ 2021)